Akashvani: Bangalore
Regional Bulletin In Kannada
01.09.2025 : 14.30hrs

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

*******

**ಮುಖ್ಯಾಂಶಗಳು:**

1. ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆಯ ವಜ್ರ ಮಹೋತ್ಸವದಲ್ಲಿ ಪಾಲ್ಗೊಳ್ಳಲು ಇಂದು ಮೈಸೂರಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಭೇಟಿ
2. ರಾಜಕೀಯ ಲಾಭಕ್ಕಾಗಿ ಬಿಜೆಪಿಯಿಂದ ಧರ್ಮಸ್ಥಳ ಚಲೋ- ಮುಖ್ಯಮಂತ್ರಿ ಸಿದ್ದರಾಮಯ್ಯ ಆರೋಪ
3. ಧರ್ಮಸ್ಥಳ ವಿರುದ್ಧ ಅಪಪ್ರಚಾರ ಖಂಡಿಸಿ, ಬಿಜೆಪಿಯಿಂದ ಧರ್ಮಸ್ಥಳ ಚಲೋ
4. ಇದೇ ೧೦ರಿಂದ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಕಡ್ಡಾಯ ವರ್ಗಾವಣೆ ಕೌನ್ಸಿಲಿಂಗ್ ಆರಂಭ

********

ಎರಡು ದಿನಗಳ ಭೇಟಿಗಾಗಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದು ಮೈಸೂರಿಗೆ ಆಗಮಿಸಲಿದ್ದಾರೆ. ಮೈಸೂರಿನ ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆಯ ವಜ್ರ ಮಹೋತ್ಸವದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಸಮಾರಂಭದಲ್ಲಿ ಅವರು, ವಜ್ರಮಹೋತ್ಸವದ ಲಾಂಛನ ಮತ್ತು ಪೋಸ್ಟರ್ ಅನ್ನು ಬಿಡುಗಡೆಗೊಳಿಸಲಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 60 @ 60 AIISH as a diamond beacon'ಎಂಬ ಪುಸ್ತಕ ಲೋಕಾರ್ಪಣೆಗೊಳಿಸಲಿದ್ದಾರೆ. ಇದೇ ವೇಳೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, The pulse of communication; AIISH in action ಎಂಬ ಕೈಪಿಡಿಯನ್ನು ಬಿಡುಗಡೆಗೊಳಿಸಲಿದ್ದಾರೆ.ಕಾರ್ಯಕ್ರಮದಲ್ಲಿ ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ರಾಜ್ಯ ಸಚಿವೆ ಅನುಪ್ರಿಯಾ ಪಟೇಲ್, ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಉಪಸ್ಥಿತರಿರಲಿದ್ದಾರೆ. ನಂತರ ಇಂದು ಸಂಜೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ಚಾಮುಂಡಿ ಬೆಟ್ಟಕ್ಕೆ ಭೇಟಿ ನೀಡಿ, ತಾಯಿ ಚಾಮುಂಡೇಶ್ವರಿಯ ದರ್ಶನ ಪಡೆಯಲಿದ್ದಾರೆ. ರಾಜವಂಶಸ್ಥೆ ಪ್ರಮೋದಾದೇವಿ ಒಡೆಯರ್ ಅವರ ಆಹ್ವಾನದ ಮೇರೆಗೆ ರಾಷ್ಟ್ರಪತಿಯವರು ನಾಳೆ

ಮೈಸೂರು ಅರಮನೆಗೂ ಭೇಟಿ ನೀಡಲಿದ್ದಾರೆ. ಹೀಗಾಗಿ ಇಂದು ಮತ್ತು ನಾಳೆ ಮೈಸೂರು ಅರಮನೆಗೆ ಪ್ರವಾಸಿಗರ ಪ್ರವೇಶವನ್ನು ನಿರ್ಬಂಧಿಸಲಾಗಿದೆ.

********

ಸರ್ಕಾರದ ಅಭಿವೃದ್ಧಿಯನ್ನು ಸಹಿಸದಿರುವ ಬಿಜೆಪಿಯವರಿಗೆ ಸುಳ್ಳು ಹೇಳುವುದು ಬಿಟ್ಟರೆ ಬೇರೇನೂ ಗೊತ್ತಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ದೂರಿದರು. ಮೈಸೂರು ಜಿಲ್ಲೆಯ ವರುಣಾ ವಿಧಾನಸಭಾ ಕ್ಷೇತ್ರದ ಸಿದ್ದರಾಮನಹುಂಡಿಯಲ್ಲಿ ಪಿಎಂಶ್ರೀ ಕರ್ನಾಟಕ ಪಬ್ಲಿಕ್ ಶಾಲೆಯ ನೂತನ ಕಟ್ಟಡವನ್ನು ಉದ್ಘಾಟಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿ ರಾಜಕೀಯವಾಗಿ ಯಾತ್ರೆ ಕೈಗೊಂಡಿದೆ. ಅವರಿಗೆ ರಾಜಕೀಯ ಲಾಭ ಸಿಗುತ್ತದೆ ಎಂದು ಭಾವಿಸಿದ್ದಾರೆ. ಆದರೆ ಅದು ಸಿಗುವುದಿಲ್ಲ. ಏಕೆಂದರೆ ಧರ್ಮಸ್ಥಳದ ಬಗ್ಗೆ ನಮಗೆ ಅಪಾರವಾದ ಗೌರವವಿದೆ. ಎಸ್ಐಟಿ ರಚಿಸಿದಾಗ ವಿರೋಧ ಮಾಡದೆ ಇದ್ದವರು, ನಂತರದಲ್ಲಿ ಏನೂ ಸಿಗುವುದಿಲ್ಲ ಎಂದು ತಿಳಿದು ವಿರೋಧಿಸುತ್ತಿದ್ದಾರೆ ಎಂದರು. ಬಾನು ಮುಷ್ತಾಕ್ ಅವರಿಗೆ ಬುಕರ್ ಪ್ರಶಸ್ತಿ ದೊರತಿದ್ದು, ಅವರನ್ನು ಗೌರವಿಸಲು ದಸರಾ ಉದ್ಘಾಟನೆಗೆ ಅವಕಾಶ ನೀಡಲಾಗಿದೆ ಎಂದು ಅವರು ಹೇಳಿದರು. ಇದಕ್ಕೂ ಮುನ್ನ ಮುಖ್ಯಮಂತ್ರಿ ಸಿದ್ದರಾಮಯ್ಯ, ಮೈಸೂರಿನ ತಮ್ಮ ನಿವಾಸದಲ್ಲಿ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿದರು.

********

ಧರ್ಮಸ್ಥಳದ ವಿರುದ್ಧ ಅಪಪ್ರಚಾರ ಖಂಡಿಸಿ, ಬಿಜೆಪಿಯಿಂದ ಇಂದು ಧರ್ಮಸ್ಥಳ ಚಲೋ ಮತ್ತು ಬೃಹತ್ ಸಮಾವೇಶ ಹಮ್ಮಿಕೊಳ್ಳಲಾಗಿದೆ. ಸಮಾವೇಶಕ್ಕೂ ಮುನ್ನ ಬಿಜೆಪಿ ರಾಜ್ಯಾಧ್ಯಕ್ಷ, ಬಿ.ವೈ. ವಿಜಯೇಂದ್ರ, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ, ವಿಧಾನಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ, ಬಿಜೆಪಿ ನಾಯಕರಾದ ಸಿ.ಟಿ. ರವಿ, ಶ್ರೀರಾಮುಲು, ಸುನಿಲ್ ಕುಮಾರ್, ಆರ್. ವಿಶ್ವನಾಥ್, ಮುನಿರತ್ನ, ಸಂಸದ ತೇಜಸ್ವಿ ಸೂರ್ಯ ಸೇರಿದಂತೆ ಇತರೆ ನಾಯಕರು ಧರ್ಮಸ್ಥಳ ಮಂಜುನಾಥನ ದರ್ಶನ ಪಡೆದರು. ನಂತರ ದೇಗುಲದ ಸಮೀಪ ಹಮ್ಮಿಕೊಂಡಿರುವ ಬೃಹತ್ ಸಮಾವೇಶದಲ್ಲಿ ಬಿಜೆಪಿ ನಾಯಕರು ಪಾಲ್ಗೊಂಡಿದ್ದಾರೆ.

********

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು, ಪ್ರಸಕ್ತ ಸಾಲಿನಲ್ಲಿ ಒಂದು ಬಾರಿಗೆ ಅನ್ವಯಿಸುವಂತೆ ಒಂದೇ ಸ್ಥಳದಲ್ಲಿ ೫ ವರ್ಷಕ್ಕಿಂತ ಹೆಚ್ಚು ಸೇವೆ ಸಲ್ಲಿಸಿದ ಎಲ್ಲಾ ಪಂಚಾಯತಿ

ಅಭಿವೃದ್ಧಿ ಅಧಿಕಾರಿಗಳನ್ನು ಕೌನ್ಸಿಲಿಂಗ್ ಮೂಲಕ ವರ್ಗಾವಣೆಗೊಳಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ. ಇದೇ ೧೦ ರಿಂದ ೨೦ ರವರೆಗೆ ಕಡ್ಡಾಯ ವರ್ಗಾವಣೆ ಕೌನ್ಸಿಲಿಂಗ್ ಹಾಗೂ ಇದೇ ೨೩ ಹಾಗೂ ೨೪ರಂದು ಸಾಮಾನ್ಯ ಕೋರಿಕೆ ವರ್ಗಾವಣೆಗಳ ಕೌನ್ಸಿಲಿಂಗ್ ಪ್ರಕ್ರಿಯೆಗಳು ಜರುಗಲಿವೆ ಎಂದು ತಿಳಿಸಿದ್ದಾರೆ. ಕರ್ನಾಟಕ ರಾಜ್ಯ ನಾಗರಿಕ ಸೇವೆಗಳು ನಿಯಮಗಳು ೨೦೨೪ನ್ನು ರಚಿಸಿ, ಅಧಿಸೂಚನೆ ಹೊರಡಿಸಲಾಗಿದೆ. ಈ ನಿಯಮಗಳಿಗೆ ಸೂಕ್ತ ತಿದ್ದುಪಡಿಗಳನ್ನು ತಂದು, ಒಂದೇ ಸ್ಥಳದಲ್ಲಿ ೫ ವರ್ಷಕ್ಕಿಂತ ಹೆಚ್ಚು ಸೇವೆ ಸಲ್ಲಿಸಿದ ಎಲ್ಲಾ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳನ್ನು ಕೌನ್ಸಿಲಿಂಗ್ ಮೂಲಕ ಕಡ್ಡಾಯವಾಗಿ ವರ್ಗಾವಣೆಗೊಳಿಸಲು ಅವಕಾಶ ಕಲ್ಪಿಸಲಾಗಿದೆ ಎಂದರು. ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಸಂಬಂಧಿಸಿದಂತೆ ಈಗಾಗಲೇ ಆನ್ ಲೈನ್ ಮೂಲಕ ವಿಶೇಷ ಪ್ರಕರಣಗಳ ಅಡಿಯಲ್ಲಿ ೫೧೫ ಅರ್ಜಿಗಳು ಹಾಗೂ ಸಾಮಾನ್ಯ ಕೋರಿಕೆಯ ಅಡಿಯಲ್ಲಿ ಒಂದು ಸಾವಿರದ ೨೧೫ ಅರ್ಜಿಗಳು ಸೇರಿದಂತೆ ಒಟ್ಟು ಒಂದು ಸಾವಿರದ ೭೩೦ ಅರ್ಜಿಗಳು ಸ್ವೀಕರಿಸಲಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

********

ದಾವಣಗೆರೆ ಜಿಲ್ಲೆಯಲ್ಲಿ ಇದೇ ೨೦ರಿಂದ ಮನೆ-ಮನೆ ಸಮೀಕ್ಷೆ ಕೈಗೊಂಡು ಪ್ರತಿ ಕುಟುಂಬದ ಸಾಮಾಜಿಕ ಮತ್ತು ಶೈಕ್ಷಣಿಕ ದತ್ತಾಂಶ ಸಂಗ್ರಹಿಸುವ ಕೆಲಸ ಆರಂಭಗೊಳ್ಳಲಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಗಿತ್ತೆ ಮಾಧವ್ ವಿಠ್ಠಲ್ ರಾವ್ ತಿಳಿಸಿದ್ದಾರೆ. ಹಿಂದುಳಿದ ವರ್ಗಗಳ ಆಯೋಗದಿಂದ ರಾಜ್ಯದ ನಾಗರಿಕರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಬಗ್ಗೆ ಸಮೀಕ್ಷಾ ಕಾರ್ಯ ನಡೆಸಲು ಮಾಸ್ಟರ್ ಟ್ರೈನರ್ಸ್, ಮೇಲ್ವಿಚಾರಕರು ಹಾಗೂ ಗಣತಿದಾರರನ್ನು ನೇಮಿಸಲು ಆಯೋಜಿಸಲಾಗಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಪ್ರತಿಯೊಂದು ಮನೆ ಹಾಗೂ ಅರಣ್ಯ ಪ್ರದೇಶದಲ್ಲಿ ನೆಲೆಸಿರುವ ಬುಡಕಟ್ಟು ಜನರು ಸೇರಿದಂತೆ, ಒಬ್ಬ ವ್ಯಕ್ತಿ ಆಗಲಿ, ಕುಟುಂಬವಾಗಲಿ ಸಮೀಕ್ಷೆಯಿಂದ ತಪ್ಪಿಸಿಕೊಳ್ಳದಂತೆ ಎಚ್ಚರಿಕೆಯಿಂದ ಸಮೀಕ್ಷೆ ಕಾರ್ಯ ಕೈಗೊಳ್ಳಬೇಕು. ಸಮೀಕ್ಷೆ ವೇಳೆ ಗೊಂದಲಗಳು ಉಂಟಾಗದಂತೆ ಜಾಗೃತಿ ವಹಿಸಬೇಕು ಎಂದು ಗಿತ್ತೆ ಮಾಧವ್ ವಿಠ್ಠಲ್ ರಾವ್ ನಿರ್ದೇಶಿಸಿದರು.

********

ಅತಿಯಾದ ಮಳೆಯಿಂದ ಕಲಬುರಗಿ ಜಿಲ್ಲೆಯ ಸೇಡಂ ತಾಲೂಕಿನಲ್ಲಿ ಹಾನಿಯಾದ ಬೆಳೆಗಳನ್ನು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವ ಡಾ.ಶರಣಪ್ರಕಾಶ ಪಾಟೀಲ ವೀಕ್ಷಿಸಿದರು.

ಸತತವಾಗಿ ಸುರಿದ ಮಳೆಯಿಂದ ಬೆಳೆ ನಷ್ಟ ಉಂಟಾದ ಪ್ರಮುಖ ಹೊಲಗಳಿಗೆ ತೆರಳಿದ ಸಚಿವರು, ಹೆಸರು ಹಾಗೂ ತೊಗರಿ ಬೆಳೆಗಳನ್ನು ಪರಿಶೀಲನೆ ನಡೆಸಿದರು. ನಂತರ ಸೇಡಂ ತಾಲೂಕಿನ ಕಲಕಂಭ ಹಾಗೂ ಅಳ್ಳೊಳ್ಳಿ ಗ್ರಾಮಗಳ ಹೊಲಗಳಿಗೆ ತೆರಳಿ ರೈತರ ಅಹವಾಲುಗಳನ್ನು ಆಲಿಸಿದರು. ಇದೇ ವೇಳೆ ಕೃಷಿ ಅಧಿಕಾರಿಗಳಿಗೆ ಬೆಳೆ ಹಾನಿ ಬಗ್ಗೆ ಪ್ರಾಥಮಿಕ ವರದಿಯನ್ನು ನೀಡುವಂತೆ ಸಚಿವರು ಸೂಚನೆ ನೀಡಿದರು.

********

ಹಾವೇರಿ ಜಿಲ್ಲೆ ಹಾನಗಲ್ ತಾಲೂಕಿನ ೧೦ ಸರ್ಕಾರಿ ಶಾಲೆಗಳಿಗೆ ಶೇಕಡ ೫೦-೫೦ ಅನುಪಾತದಲ್ಲಿ ಓಸ್ಯಾಟ್ ಸಂಸ್ಥೆಯ ಸಹಯೋಗದಲ್ಲಿ ಒಟ್ಟು ೭ ಕೋಟಿ ೩೦ ಲಕ್ಷ ರೂಪಾಯಿ ವೆಚ್ಚದಲ್ಲಿ ಅತ್ಯಾಧುನಿಕ ಮಾದರಿಯ ಕಟ್ಟಡ ನಿರ್ಮಿಸಲು ಉದ್ದೇಶಿಸಲಾಗಿದೆ ಎಂದು ಶಾಸಕ ಶ್ರೀನಿವಾಸ ಮಾನೆ ತಿಳಿಸಿದ್ದಾರೆ. ಹಾನಗಲ್ ತಾಲೂಕಿನ ಕೊಪ್ಪರಸಿಕೊಪ್ಪದಲ್ಲಿಂದು ಅಮೆರಿಕದ ಓಪ್ಯಾಟ್ ಸಂಸ್ಥೆ ೭೫ ಲಕ್ಷ ರೂಪಾಯಿ ವೆಚ್ಚದಲ್ಲಿ ನಿರ್ಮಿಸಿದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ನೂತನ ಕಟ್ಟಡ ಉದ್ಘಾಟಿಸಿ ಮಾತನಾಡಿದ ಅವರು, ೧೦ ಶಾಲೆಗಳ ಕಟ್ಟಡಗಳ ನಿರ್ಮಾಣಕ್ಕೆ ತಗಲುವ ವೆಚ್ಚದಲ್ಲಿ ೩ ಕೋಟಿ ೬೫ ಲಕ್ಷ ರೂಪಾಯಿ ವೆಚ್ಚವನ್ನು ಓಸ್ಯಾಟ್ ಸಂಸ್ಥೆ ಭರಿಸಲಿದ್ದು, ಇನ್ನುಳಿದ ೩ ಕೋಟಿ ೬೫ ಲಕ್ಷ ರೂಪಾಯಿ ವೈಯಕ್ತಿಕ ಹಾಗೂ ದಾನಿಗಳ ನೆರವಿನಿಂದ ಭರಿಸಲು ಉದ್ದೇಶಿಸಲಾಗಿದೆ ಎಂದು ವಿವರಿಸಿದರು.

********

ಉತ್ತರ ಕನ್ನಡ ಜಿಲ್ಲೆಯಲ್ಲಿ ನರೇಗಾ, ಜಲ್ ಜೀವನ್ ಮಿಷನ್, ಸ್ವಚ್ಛ ಭಾರತ್ ಮಿಷನ್ ಸೇರಿದಂತೆ ಎಲ್ಲಾ ಯೋಜನೆಗಳನ್ನು ಅತ್ಯಂತ ಸಮರ್ಪಕವಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಕಾರ್ಯ ನಿರ್ವಹಿಸಲಾಗುತ್ತಿದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ದಿಲೀಷ್ ಶಶಿ ಹೇಳಿದ್ದಾರೆ. ಕಾರವಾರದಲ್ಲಿ ಈ ಬಗ್ಗೆ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಎಲ್ಲಾ ಯೋಜನೆಗಳ ಗುರಿ ಸಾಧನೆಯ ಸ್ಥಿತಿಗತಿ ಕುರಿತು ಖುದ್ದು ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಲಾಗುತ್ತಿದೆ ಎಂದರು. ಜಿಲ್ಲೆಯಲ್ಲಿನ ಎಲ್ಲ ೨೨೯ ಗ್ರಾಮ ಪಂಚಾಯಿತಿಗಳು ಹಾಗೂ ಅವುಗಳ ವ್ಯಾಪ್ತಿಯಲ್ಲಿನ ಶಾಲೆ, ಅಂಗನವಾಡಿ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮಾದರಿ ಕೇಂದ್ರಗಳಾಗಿ ರೂಪಿಸುವ ಗುರಿ ಹೊಂದಲಾಗಿದೆ. ಪರಿಸರ ಪೂರಕ ಪ್ರವಾಸೋದ್ಯಮ ಅಭಿವೃದ್ಧಿಗೆ ಜಿಲ್ಲಾ ಪಂಚಾಯಿತಿ ವತಿಯಿಂದ ಹೆಚ್ಚಿನ ಒತ್ತು ನೀಡಲಾಗುವುದು ಎಂದು ಅವರು ಹೇಳಿದರು.

********

ರಾಜ್ಯ ಸರ್ಕಾರ ಜಾರಿಗೊಳಿಸಿರುವ ಐದು ಗ್ಯಾರಂಟಿ ಯೋಜನೆಗಳ ಲಾಭ ಪ್ರತಿಯೊಬ್ಬ ಅರ್ಹ ಫಲಾನುಭವಿಗಳಿಗೆ ದೊರೆಯುವಂತೆ ನೋಡಿಕೊಳ್ಳಬೇಕು ಎಂದು ಯಾದಗಿರಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಶ್ರೇಣಿಕ್ ಕುಮಾರ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಯಾದಗಿರಿ ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಅನ್ನ ಭಾಗ್ಯ ಯೋಜನೆಯಡಿ ಅರ್ಹರಿಗೆ ಲಾಭ ದೊರೆಯುತ್ತಿರುವ ಬಗ್ಗೆ ನಿಗಾ ಇರಿಸಬೇಕು. ನ್ಯಾಯ ಬೆಲೆ ಅಂಗಡಿಗಳ ವ್ಯಾಪ್ತಿಯಲ್ಲಿಯೂ ಎಚ್ಚರ ವಹಿಸಬೇಕು. ಅನಿರೀಕ್ಷಿತವಾಗಿ ಭೇಟಿ ನೀಡಿ ಪರಿಶೀಲಿಸಬೇಕು ಎಂದು ನಿರ್ದೇಶಿಸಿದರು. ಗೃಹಲಕ್ಷ್ಮಿ ಯೋಜನೆಯಿಂದ ಅರ್ಹರು ವಂಚಿತರಾಗದಂತೆ ನೋಡಿಕೊಂಡು, ಸಕಾಲಕ್ಕೆ ಹಣ ಪಾವತಿ ಆಗುವಂತೆಯೂ ಮಾಡಬೇಕು ಎಂದು ಅವರು ಹೇಳಿದರು. ಈ ವೇಳೆ ಯಾದಗಿರಿ ಜಿಲ್ಲಾ ಪಂಚಾಯಿತಿ ಸಿಇಒ ಲವೀಶ್ ಒರಡಿಯಾ ಉಪಸ್ಥಿತರಿದ್ದರು.

********

ಗ್ರಾಮಗಳಿಗೆ ಗ್ರಾಮ ಪಂಚಾಯಿತಿಯೇ ಸ್ಥಳೀಯ ಸರ್ಕಾರವಾಗಿದೆ. ಪ್ರತಿ ಗ್ರಾಮಗಳಿಗೆ ಮೂಲ ಸೌಲಭ್ಯ ಕಲ್ಪಿಸುವಂತಾಗಬೇಕು ಎಂದು ಶಾಸಕ ಜಿ.ಕೆ.ವೆಂಕಟಶಿವಾರೆಡ್ಡಿ ಹೇಳಿದ್ದಾರೆ. ಕೋಲಾರ ಜಿಲ್ಲೆಯ ಶ್ರೀನಿವಾಸಪುರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸ್ಮಶಾನ ಭೂಮಿಯನ್ನು ಯಾರಾದರೂ ಒತ್ತುವರಿ ಮಾಡಿಕೊಂಡಿದ್ದರೆ, ಅದನ್ನು ತೆರವುಗೊಳಿಸಲು ಕ್ರಮವಹಿಸಬೇಕು. ಹೈಮಾಸ್ಟ್ ದೀಪಗಳನ್ನು ಅವಶ್ಯವಿರುವ ಸ್ಥಳ ಗುರುತಿಸಿ ಅಳವಡಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದೆ. ಕೆಲ ಕಾಲೊನಿಗಳಲ್ಲಿ ಸಿ.ಸಿ. ರಸ್ತೆಗಳ ಕಾಮಗಾರಿಗಳನ್ನು ಕೈಗೊಳ್ಳಲು ಅಗತ್ಯ ಸಿದ್ಧತೆ ನಡೆಸುವಂತೆ ಅಧಿಕಾರಿಗಳಿಗೆ ನಿರ್ದೇಶಿಸಲಾಗಿದೆ ಎಂದರು.

********